**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ/ 10 /ಎಸಿಎಂ(2)/2018-19

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 18-06-2018.

**-:: ಸುತ್ತೋಲೆ ::-**

**ವಿಷಯ:** **2018-19ನೇ ಸಾಲಿನ ಜೆ.ಎಸ್.ಎಸ್ ವಿಶೇಷಚೇತನರ ಅಭ್ಯರ್ಥಿಗಳಿಗೆ (Differently Abled) ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.**

**ಉಲ್ಲೇಖ:**
1. ಸರ್ಕಾರದ ಆದೇಶ ಸಂ. ಇಡಿ 207 ಟಿಜಿಎಲ್ 2016, ದಿ:20-03-2017.
2. ಪ್ರಾಂಶುಪಾಲರು, ಜೆ.ಎಸ್.ಎಸ್ ವಿಶೇಷಚೇತನರ ಪಾಲಿಟೆಕ್ನಿಕ್, ಮೈಸೂರು ಇವರ ಪತ್ರ ಸಂ. ಜೆಎಸ್ಎಸ್ ವಿ.ಪಾ/06 ಎಸಿಎಂ/2018-19, ದಿ:15-06-2018.

-00000000-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, **ಜೆ.ಎಸ್.ಎಸ್ ವಿಶೇಷಚೇತನರ ಪಾಲಿಟೆಕ್ನಿಕ್, ಮೈಸೂರು** (ಅನುದಾನಿತ) ಈ ಸಂಸ್ಥೆಯಲ್ಲಿನ ಡಿಪ್ಲೋಮಾ ಕೋರ್ಸುಗಳಿಗೆ Orthopedically Handicapped, Hearing Impaired & Visually Impaired ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ವಿಶೇಷಚೇತನರ (Differently Abled) ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸುವ ಅಂತಿಮ ದಿ:**15-06-2018** ಎಂದು ನಿಗಧಿಪಡಿಸಿ ಉಲ್ಲೇಖಿತ ಈ ಕಛೇರಿ ಪ್ರವೇಶಾಧಿಸೂಚನೆಯಲ್ಲಿ ಸೂಚಿಸಲಾಗಿತ್ತು.

ಉಲ್ಲೇಖ(2)ರ ಪ್ರಾಂಶುಪಾಲರ ಪತ್ರದಲ್ಲಿ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ಅಂತಿಮ ದಿನಾಂಕವನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ. ಈ ಸಂಬಂಧದಲ್ಲಿ ಪ್ರಿನ್ಸಿಪಾಲರ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ **ಅರ್ಜಿ ವಿತರಿಸಲು ಹಾಗೂ ಸ್ವೀಕರಿಸಲು ದಿ:22-06-2018 ರವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸತಕ್ಕದ್ದು. ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಸದರಿ ಸಂಸ್ಥೆಯು ವಿಶೇಷಚೇತನರ ಪಾಲಿಟೆಕ್ನಿಕ್ ಆಗಿರುವುದರಿಂದ ವಿಶೇಷಚೇತನ ಅಭ್ಯರ್ಥಿಗಳು ಪ್ರವೇಶ ಪಡೆಯಲು ಇದರ ಸದುಪಯೋಗಪಡಿಸಿಕೊಳ್ಳಲು ಈ ಮೂಲಕ ತಿಳಿಸಲಾಗಿದೆ.

***ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂ. 0821-2548315, Email: jsspda@gmail.com / mailme@jsspda.rg & ವೆಬ್‌ಸೈಟ್ : www.jsspda.org ನ್ನು ಸಂಪರ್ಕಿಸುವುದು.***

ನಿರ್ದೇಶಕರು

**ಇವರಿಗೆ,**

ಪ್ರಿನ್ಸಿಪಾಲರು, ಜೆ.ಎಸ್.ಎಸ್ ವಿಶೇಷಚೇತನರ ಪಾಲಿಟೆಕ್ನಿಕ್, ಮೈಸೂರು – ಇವರ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ.

ಪ್ರತಿ ಮಾಹಿತಿಗಾಗಿ:-

1. ಜಂಟಿ ನಿರ್ದೇಶಕರು(ಆಡಳಿತ), ತಾಂ.ಶಿ.ನಿ, ಬೆಂಗಳೂರು.
2. ಕಾರ್ಯದರ್ಶಿಗಳು(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
3. ನಿರ್ದೇಶಕರ ಆಪ್ತಶಾಖೆಗೆ,
4. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂ.ಶಿ.ನಿ, ಬೆಂಗಳೂರು,
5. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಪ್ರವೇಶಾಧಿಸೂಚನೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಕಡತಕ್ಕೆ

File 10-18(JSS PH Adm)